# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ:: ಬನ್ನಾರಿ ಅಮ್ಮನ್ ಶುಗರ್‍ಸ್ ಲಿಮಿಟೆಡ್ (M/s Bannari Amman Sugars Ltd) ಇವರಿಗೆ 20 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ನೀರಾಕ್ಷೇಪಣಾ ಪತ್ರ ನೀಡುವ ಕುರಿತು.

ಓದಲಾಗಿದೆ: 1. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಆದೇಶ ಸಂಖ್ಯೆ : ಸಿಐ 147 ಎಸ್‌ಪಿಐ 2011 ದಿನಾಂಕ :24.08.2011.

2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿಎಲ್/04/F-91/2013-14/1668 ದಿನಾಂಕ: 17.07.2013 ಮತ್ತು ಕೆಆರ್‌ಇಡಿಎಲ್/04/F-91/2013-14/2245 ದಿನಾಂಕ: 01.10.2013.

* * *

**ಪ್ರಸ್ತಾವನೆ: –**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ:: ಬನ್ನಾರಿ ಅಮ್ಮನ್ ಶುಗರ್‍ಸ್ ಲಿಮಿಟೆಡ್ ಇವರಿಗೆ ಚಾಮರಾಜನಗರ ಜಿಲ್ಲೆಯ, ಕೊಳ್ಳೇಗಾಲ ತಾಲ್ಲೂಕಿನ, ಕುಂತೂರ್ ಗ್ರಾಮದಲ್ಲಿ 4500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆ ಸ್ಥಾಪಿಸಲು ಹಾಗೂ 27 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು ಅನುಮೋದನೆ ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ:: ಬನ್ನಾರಿ ಅಮ್ಮನ್ ಶುಗರ್‍ಸ್ ಲಿಮಿಟೆಡ್ ರವರಿಗೆ ಚಾಮರಾಜನಗರ ಜಿಲ್ಲೆಯ, ಕೊಳ್ಳೇಗಾಲ ತಾಲ್ಲೂಕಿನ, ಕುಂತೂರ್ ಗ್ರಾಮದಲ್ಲಿ ಮಂಜೂರಾಗಿರುವ 4500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯೊಂದಿಗೆ 27 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಯೋಜನೆಗೆ ಮಂಜೂರಾತಿ ದೊರೆತಿದ್ದರೂ ಸಹ ಸಧ್ಯಕ್ಕೆ ಕಂಪನಿಯು 20 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನೆಗೆ ಅನುಮತಿ ನೀಡುವಂತೆ ಹಾಗೂ ಈ ಪೈಕಿ 12.70 ಮೆ.ವ್ಯಾ. (exportable during season) ಹಾಗೂ 18.60 ಮೆ.ವ್ಯಾ. (exportable during off season) ಸಾಮರ್ಥ್ಯದ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸಲು ನೀರಾಕ್ಷೇಪಣಾ ಪತ್ರ ನೀಡುವಂತೆ ಕೋರಿರುವುದರಿಂದ ಈ ಕುರಿತು ಸ್ಥಳ ಪರಿಶೀಲನಾ ವರದಿಯೊಂದಿಗೆ ಪ್ರಸ್ತಾವನೆಯನ್ನು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 215 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 22.10.2013.**

ಮೆ:: ಬನ್ನಾರಿ ಅಮ್ಮನ್ ಶುಗರ್‍ಸ್ ಲಿಮಿಟೆಡ್ (M/s Bannari Amman Sugars Ltd) ರವರಿಗೆ ಚಾಮರಾಜನಗರ ಜಿಲ್ಲೆಯ, ಕೊಳ್ಳೇಗಾಲ ತಾಲ್ಲೂಕಿನ, ಕುಂತೂರ್ ಗ್ರಾಮದ ಬಳಿ ಸ್ಥಾಪಿಸಲು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು ಅನುಮತಿ ನೀಡಿರುವ 27 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಯೋಜನೆಯ ಪೈಕಿ ಪ್ರಸ್ತುತ 20 ಮೆ.ವ್ಯಾ ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಪ್ರಾರಂಭಿಸಲು ಮತ್ತು ಈ ಪೈಕಿ 12.70 ಮೆ.ವ್ಯಾ. (exportable during season) ಹಾಗೂ 18.60 ಮೆ.ವ್ಯಾ. (exportable during off season) ಸಹ-ವಿದ್ಯುತ್ ಘಟಕ ಸ್ಥಾಪಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ 'ನಿರಾಕ್ಷೇಪಣೆಯನ್ನು' ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;

--2)

2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ/ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ಪಿಪಿಎ/ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ KREDL ಗೆ ಶುಲ್ಕ ಪಾವತಿಸತಕ್ಕದ್ದು;
5. ಯೋಜನೆ ಅನುಷ್ಠಾನ ಕುರಿತು ಅಭಿವೃದ್ಧಿದಾರರು, ಪ್ರತಿ 6 ತಿಂಗಳಿಗೊಮ್ಮೆ ಪ್ರಗತಿ ವರದಿ ಸಲ್ಲಿಸುವುದು

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 080–22034674.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಚಾಮರಾಜನಗರ ಜಿಲ್ಲೆ, ಚಾಮರಾಜನಗರ
8 ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
9 M/s Bannari Amman Sugars Ltd. No: 1212, Trichy Road, Coimbatore-641 018, Tamilnadu.
10 ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾಠದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

—